ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

17

ಇಲಾಖೆ / ವಿಷಯ : DEPARTMENT / SUBJECT: ಭ್ರಷ್ಟಾಚಾರ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE 28-10-20

# ವಂಶಪಾರಂಪರ್ಯ ಭ್ರಷ್ಟಾಚಾರ ಗೆದ್ದಲು ಇದ್ದಂತೆ: ಮೋದಿ

ನವದೆಹಲಿ: ವಂಶಪಾರಂಪರ್ಯ ಭ್ರಷ್ಟಾಚಾರದ ವಿರುದ್ಧ ಕಠಿಣ ಕ್ರಮದ ಅಗತ್ಯವನ್ನು ಪ್ರತಿಪಾದಿಸಿರುವ ಪ್ರಧಾನಿ ನರೇಂದ್ರ ಮೋದಿ, ಇದು ಇಂದು ಕೆಲ ರಾಜ್ಯಗಳಲ್ಲಿ ರಾಜಕೀಯ ಸಂಸ್ಕೃತಿಯ ಭಾಗವಾಗಿ ಹೋಗಿದೆ ಮತ್ತು ದೇಶದ ಬೆಳವಣಿಗೆ ಅತಿದೊಡ್ಡ ಸವಾಲಾಗಿ ಹೊರಹೊಮ್ಮಿದೆ. ಗೆದ್ದಲಿನಂತಾಗಿದೆ ಎಂದು ಕಿಡಿಕಾರಿದ್ದಾರೆ. ಸಿಬಿಐ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಮೋದಿ 'ವಂಶಪಾರಂಪರ್ಯ ಭ್ರಷ್ಟಾಚಾರದಲ್ಲಿ ಭ್ರಷ್ಟಾಚಾರವು ಒಂದು ತಲೆಮಾರಿನಿಂದ ಇನ್ನೊಂದು ತಲೆಮಾರಿಗೆ ವರ್ಗಾವಣೆಯಾಗುತ್ತಿರುತ್ತದೆ. ದಶಕಗಳಿಂದ ಇದರ ಹಾವಳಿ ಹೆಚ್ಚಾಗಿದ್ದು, ದೇಶದ ಮುಂದೆ ದೊಡ್ಡ ಸವಾಲಾಗಿ ಹೊರಹೊಮ್ಮಿದೆ. ಇಂಥ ಭ್ರಷ್ಟಾಚಾರದಲ್ಲಿ ತೊಡಗಿದ್ದ ವ್ಯಕ್ತಿಗಳನ್ನು ಸೂಕ್ತವಾಗಿ ಶಿಕ್ಷಿಸದೇ ಹೋದಾಗ, ಅದು ಮುಂದಿನ ತಲೆಮಾರಿನ ಜನರ ಕೂಡ ನಿರ್ಭೀತಿಯಿಂದ ಭ್ರಷ್ಟಾಚಾರದಲ್ಲಿ ಮುಂದುವರೆಯುತ್ತದೆ ಎಂದರು.

